# ಕರ್ನಾಟಕ ವಿಧಾನ ಪರಿಷತ್ತು

**ಸದಸ್ಯರ ಹೆಸರು** : ಡಾ:ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : (443)390

**ಉತ್ತರಿಸಬೇಕಾದ ದಿನಾಂಕ** : 30.01.2026

| ಕ್ರಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ನೀರಿನಲ್ಲಿ ನೈಸರ್ಗಿಕವಾಗಿ ಆರ್ಸೆನಿಕ್ ಮತ್ತು ಫ್ಲೋರೈಡ್ ಅಂಶ ಹೆಚ್ಚಿರುವ ಕಾರಣದಿಂದ ಐದು ವರ್ಷಗಳಲ್ಲಿ ಆಗಿರುವ ಸಾವುಗಳ ಸಂಖ್ಯೆ ಎಷ್ಟು: (ವಿವರ ನೀಡುವುದು) | ಕಳೆದ ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ನೈಸರ್ಗಿಕವಾಗಿ ನೀರಿನಲ್ಲಿರುವ ಆರ್ಸೆನಿಕ್ ಮತ್ತು ಫ್ಲೋರೈಡ್ ಅಂಶಗಳಿಂದಾಗಿ ಯಾವುದೇ ಸಾವುಗಳ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಆ) | ಈ ಭಾಗದ ಏಳು ಜಿಲ್ಲೆಗಳಲ್ಲಿ ಸ್ಥಾಪಿಸಿದ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಅರ್ಧದಷ್ಟು ಘಟಕಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಅವುಗಳನ್ನು ಪುನ: ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು | ಈ ಭಾಗದ ಏಳು ಜಿಲ್ಲೆಗಳಲ್ಲಿ ಒಟ್ಟು 3958 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, 2696 ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ 1262 ಘಟಕಗಳು ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಮುಂದುವರೆದು ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಅಳವಡಿಸಲಾದ ಶುದ್ಧ ಕುಡಿಯುವ ನೀರು ಘಟಕಗಳು ದುರಸ್ತಿಯಿಂದಾಗಿ ಸ್ಥಗಿತಗೊಂಡಿದ್ದು, ಇವುಗಳ ಪುನಶ್ಚೇತನಕ್ಕೆ External Aided Project (EAP) ನಡಿ ಕ್ರಿಯಾ ಯೋಜನೆಯನ್ನು ಅನುಮೋದಿಸಲಾಗಿರುತ್ತದೆ. ಸದರಿ ಕ್ರಿಯಾ ಯೋಜನೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಿಗೆ ಸಂಬಂಧಿಸಿದಂತೆ, ಒಟ್ಟು ರೂ. 555 ಲಕ್ಷಗಳನ್ನು ಮೀಸಲಿರಿಸಿದ್ದು ಆದ್ಯತೆ ಮೇರೆಗೆ ಸ್ಥಗಿತಗೊಂಡಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿಗೊಳಿಸಿ ಚಾಲನೆಗೊಳಿಸಲು ಅಗತ್ಯ ಕ್ರಮಕೈಗೊಳ್ಳಬೇಕಿದೆ. |

| | | |
|---|---|---|
| ಇ) | ಕಲುಷಿತ ನೀರಿನಿಂದ ಈ ಭಾಗದ ಜನರು ಡೆಂಗ್ಯೂ, ಅತಿಸಾರ, ಟೈಫಾಯಿಡ್, ಹೆಪಟೈಟಿಸ್-ಎ ಅಂತಹ ಮಾರಕ ರೋಗಗಳಿಗೆ ಬಲಿಯಾಗುತ್ತಿರುವುದರಿಂದ ಈ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಸಮಗ್ರ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಂಡಿದೆ. ಮುಖ್ಯವಾಗಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ವಿಶೇಷ ಅಭಿಯಾನಗಳ ಮೂಲಕ ಮನೆ ಮನೆಗೆ ಭೇಟಿ ನೀಡಿ ಕುದಿಸಿ ಆರಿಸಿದ ನೀರನ್ನು ಕುಡಿಯುವಂತೆ ಮತ್ತು ನೀರಿನ ಮೂಲಗಳನ್ನು ಶುಚಿಯಾಗಿಟ್ಟುಕೊಳ್ಳುವಂತೆ ಜನರಿಗೆ ಮನವರಿಕೆ ಮಾಡಲಾಗುತ್ತಿದೆ. ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ (VWSC) ಮೂಲಕ ನೀರಿನ ಟ್ಯಾಂಕ್‌ಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸುವುದು ಹಾಗೂ ಕ್ಲೋರಿನೇಷನ್ ಹಾಗೂ ಕೊಳಚೆ ನೀರು ನಿಲ್ಲದಂತೆ ಮುನ್ನೆಚ್ಚರಿಕೆ ವಹಿಸಲು ಮಾರ್ಗದರ್ಶನ ನೀಡಲಾಗುತ್ತಿದೆ.<br><br>ಇಲಾಖೆಯ ಸಾಮಾಜಿಕ ಮಾಧ್ಯಮಗಳಾದ ಫೇಸ್‌ಬುಕ್, ಎಕ್ಸ್ ಮತ್ತು ವಾಟ್ಸಾಪ್ ಗ್ರೂಪ್‌ಗಳನ್ನು ಬಳಸಿ ಕಿರು ವಿಡಿಯೋಗಳನ್ನು ಪ್ರಸಾರ ಮಾಡಲಾಗುತ್ತಿದೆ. ರೋಗದ ಲಕ್ಷಣಗಳು ಮತ್ತು ತಡೆಗಟ್ಟುವ ಕ್ರಮಗಳ ಕುರಿತು ಇಲಾಖೆಯ ಅಧಿಕೃತ ಜಾಲತಾಣಗಳಲ್ಲಿ ಮಾಹಿತಿ ಹಂಚಿಕೊಳ್ಳುವುದರ ಜೊತೆಗೆ, ಪ್ರತಿ ಹಳ್ಳಿಯ ಸಾರ್ವಜನಿಕ ಸ್ಥಳಗಳಲ್ಲಿ ಬಿತ್ತಿಪತ್ರಗಳನ್ನು ಅಳವಡಿಸಲಾಗಿದೆ. ಗ್ರಾಮೀಣ ಜನರಲ್ಲಿ ವೈಯಕ್ತಿಕ ಮತ್ತು ಸಮುದಾಯ ನೈರ್ಮಲ್ಯದ ಬಗ್ಗೆ ಜವಾಬ್ದಾರಿಯನ್ನು ಹೆಚ್ಚಿಸುವಲ್ಲಿ ಇಲಾಖೆಯು ಕ್ರಮವಹಿಸುತ್ತಿದೆ. |
| ಈ) | ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಯ ಪ್ರತಿನಿಧಿಗಳು ಮತ್ತು ಆಡಳಿತ ಸಿಬ್ಬಂದಿಯ ಸೇವೆಯನ್ನು ಬಳಸಲಾಗುತ್ತಿದೆಯೇ? | ನೀರಿನ ಗುಣಮಟ್ಟದ ಪರೀಕ್ಷೆಗಳನ್ನು ಪ್ರಾಥಮಿಕ ಹಂತದಲ್ಲಿ ಕೈಗೊಳ್ಳಲು ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಪ್ರತಿನಿಧಿಗಳಿಗೆ ಅಗತ್ಯ ತರಬೇತಿಗಳನ್ನು ಒದಗಿಸಲಾಗಿದ್ದು, ನೀರಿನ ಗುಣಮಟ್ಟದ ಪರೀಕ್ಷೆಗಳಲ್ಲಿ ಸದರಿರವರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ. ಇದಲ್ಲದೇ ನೀರು ಮತ್ತು ನೈರ್ಮಲ್ಯ ಅರಿವು ಕಾರ್ಯಕ್ರಮಗಳಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ಸೇವೆಯನ್ನು ಉಪಯೋಗಿಸಿಕೊಳ್ಳಲಾಗುತ್ತಿದೆ. |

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಸಚಿವರು.